ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 27/1/21

# ಅಕ್ರಮ ಗಣಿ ಸಕ್ರಮ: ಇಂದು ಸಭೆ

## ಕಾನೂನಿನ ವ್ಯಾಪ್ತಿಯಲ್ಲಿ ಹೊಸ ನಿಯಮದಡಿ ಸಕ್ರಮಕ್ಕೆ ಚಿಂತನೆ

**ಯಾದಗಿರಿ:** ಶಿವಮೊಗ್ಗದಲ್ಲಿ ಕ್ವಾರಿ ದುರ್ಘಟನೆ ನಂತರ ಗಣಿಗಾರಿಕೆಗೆ ಸಂಬಂಧಿಸಿ ಹೊಸ ನಿರ್ಧಾರವೊಂದಕ್ಕೆ ಬರಲು ಸರ್ಕಾರ ಮುಂದಾಗಿದೆ. ಕಾನೂನು ವ್ಯಾಪ್ತಿಗೆ ಒಳಪಟ್ಟು ಹೊಸ ನಿಯಮಗಳ ಅಡಿಯಲ್ಲೇ ಅಕ್ರಮ ಗಣಿಗಾರಿಕೆಯನ್ನು ಸಕ್ರಮಗೊಳಿಸಲು ಗಂಭೀರ ಚಿಂತನೆ ನಡೆಸಿದೆ.



ಈ ಕುರಿತು ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಗಣಿ ಮತ್ತು ಭೂ ವಿಜ್ಞಾನ ಸಚಿವ ಮುರುಗೇಶ್ ಆರ್. ನಿರಾಣಿ, ಅಕ್ರಮ ಗಣಿಗಾರಿಕೆಯನ್ನು ಸಕ್ರಮಗೊಳಿಸಲು ಸರ್ಕಾರ ಗಂಭೀರ ಚಿಂತನೆ ನಡೆಸಿದೆ. ಇದಕ್ಕಾಗಿಯೇ ಬುಧವಾರ ಮತ್ತು ಗುರುವಾರ ಅಧಿಕಾರಿಗಳ ಸಭೆ ಕರೆಯಲಾಗಿದೆ ಎಂದು ಮಾಹಿತಿ ನೀಡಿದರು.

ಅಭಿವೃದ್ಧಿ ಹಿನ್ನೆಲೆಯಲ್ಲಿ ಗಣಿಗಾರಿಕೆ ಅವಶ್ಯಕ, ಇದನ್ನು ತಡೆಯಲು ಸಾಧ್ಯವಿಲ್ಲ, ಹೀಗಾಗಿ, ಅಕ್ರಮ ಗಣಿಗಾರಿಕೆಯನ್ನು ಕಾನೂನು ವ್ಯಾಪ್ತಿಯಲ್ಲಿ ಸಕ್ರಮಗೊಳಿಸಲು ಹೊಸ ನಿಯಮ ಜಾರಿ ಮಾಡುವ ಚಿಂತನೆ ಇದೆ. ಹಾಲಿ ಇರುವ ಕಾಯ್ದೆಗಳಿಗೂ ತಿದ್ದುಪಡಿ ಮಾಡಿ ರಾಜ್ಯದಲ್ಲಿ ಹೊಸದಾಗಿ ಗಣಿ ಕಾಯ್ದೆ ಜಾರಿ ಮಾಡಲಾಗುವುದು, ಈ ಸಂಬಂಧ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರೊಂದಿಗೆ ಚರ್ಚಿಸಿ ಅಂತಿಮ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದರು.

ರಾಜ್ಯದಲ್ಲಿ ಮಾತ್ರ ಅಕ್ರಮವಾಗಿ ಗಣಿಗಾರಿಕೆ ನಡೆಯುತ್ತಿಲ್ಲ, ದೇಶಾದ್ಯಂತ ಇದು ನಡೆಯುತ್ತಿದೆ. ಆದರೆ, ಇದನ್ನು ಯಾವ ರೀತಿ ತಡೆಗಟ್ಟಬೇಕು ಎಂಬ ಬಗ್ಗೆ ಚರ್ಚಿಸಿ, ಸರ್ಕಾರ ಸೂಕ್ತ ನಿರ್ಧಾರ ತೆಗೆದುಕೊಳ್ಳಲಾಗುವುದು. ಬೇರೆ ಬೇರೆ ರಾಜ್ಯಗಳಲ್ಲಿ ಯಾವ ರೀತಿ ಅಕ್ರಮ ಗಣಿಗಾರಿಕೆ ತಡೆಗಟ್ಟಲು ಕಾಯ್ದೆ ಜಾರಿ ಮಾಡಿದ್ದಾರೆ ಎಂಬ ಬಗ್ಗೆಯೂ ಅಧ್ಯಯನ ನಡೆಸುತ್ತಿದ್ದೇವೆ ಎಂದ ನಿರಾಣಿ, ಗಣಿಗಾರಿಕೆ ತಪ್ಪಲ್ಲ. ಆದರೆ, ಅಕ್ರಮವಾಗಿ ಇಲ್ಲವೇ ಕಾನೂನಿಗೆ ವಿರುದ್ಧವಾಗಿ ನಡೆಸಿದರೆ ನಿರ್ದಾಕ್ಷಿಣ್ಯ ಕ್ರಮ ಜರುಗಿಸುತ್ತೇವೆ ಎಂದು ಎಚ್ಚರಿಕೆ ನೀಡಿದರು.